# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 21/5/2020

### ದೇಶಾದ್ಯಂತ 5,611 ಹೊಸ ಕೇಸ್, ಕರ್ನಾಟಕ 67

# ರಾಜ್ಯದಲ್ಲಿ ಕೊರೊನಾ ಕೊಂಚ ಕ್ಷೀಣ

ಕೊರೊನಾ ಆತಂಕ

**ಬೆಂಗಳೂರು/ಹೊಸದಿಲ್ಲಿ:** ರಾಜ್ಯದಲ್ಲಿ ಒಂದೇ ದಿನ ನೂರಾರು ಸಂಖ್ಯೆಯಲ್ಲಿ ಜಿಗಿತ ಕಂಡಿದ್ದ ಕೊರೊನಾ ಸೋಂಕಿನ ಆರ್ಭಟ ಬುಧವಾರ ಕೊಂಚ ಕಡಿಮೆಯಾಗಿದೆ. ರಾಜ್ಯಾದ್ಯಂತ ಬುಧವಾರ ಸಂಜೆವರೆಗೂ 24 ಗಂಟೆಯಲ್ಲಿ 67 ವ್ಯಕ್ತಿಗಳಿಗೆ ಸೋಂಕು ದೃಢಪಟ್ಟಿದೆ. ಇದರೊಂದಿಗೆ ರಾಜ್ಯದಲ್ಲಿ ಒಟ್ಟು ಸೋಂಕಿತರ ಸಂಖ್ಯೆ 1,462ಕ್ಕೆ ತಲುಪಿದೆ. ಈ ಮಧ್ಯೆ, ಸೋಂಕಿಗೆ ಬೆಂಗಳೂರಿನಲ್ಲಿ 42 ವರ್ಷದ ವ್ಯಕ್ತಿಯೊಬ್ಬರು ಬಲಿಯಾಗಿದ್ದಾರೆ.

ಬೆಂಗಳೂರಿನಲ್ಲಿ ಬುಧವಾರ 4 ಪ್ರಕರಣಗಳು ವರದಿಯಾಗಿದ್ದು, ರಾಜಧಾನಿಯಲ್ಲಿ ಒಟ್ಟು ಸೋಂಕಿತರ ಸಂಖ್ಯೆ 250ಕ್ಕೆ ತಲುಪಿದೆ. ಹಾಸನದಲ್ಲಿ ಬರೋಬ್ಬರಿ 21 ಮಂದಿಗೆ ಸೋಂಕು ದೃಢಪಟ್ಟಿದೆ. ಉಳಿದಂತೆ ಮಂಡ್ಯದಲ್ಲಿ 8, ಕಲಬುರ್ಗಿಯಲ್ಲಿ 7, ಬೀದರ್‌ನಲ್ಲಿ 10, ಉಡುಪಿಯಲ್ಲಿ 6, ತುಮಕೂರಿನಲ್ಲಿ 4, ರಾಯಚೂರು 4, ಉತ್ತರ ಕನ್ನಡ ದಕ್ಷಿಣ ಕನ್ನಡದ ಮತ್ತು ಯಾದಗಿರಿಯಲ್ಲಿ 1 ಹೊಸ ಪ್ರಕರಣಗಳು ಪತ್ತೆಯಾಗಿವೆ.

ಈ ಮಧ್ಯೆ ದೇಶಾದ್ಯಂತ ಹೊಸ ಪ್ರಕರಣಗಳ ಸಂಖ್ಯೆ ದಿನದಿಂದ ದಿನಕ್ಕೆ ಹೊಸ ದಾಖಲೆಗೆ ಸಾಕ್ಷಿಯಾಗುತ್ತಿದೆ. ಕಳೆದ 24 ಗಂಟೆಯಲ್ಲಿ 5,611 ಹೊಸ ಪ್ರಕರಗಳು ಪತ್ತೆಯಾಗಿವೆ. ಎರಡೇ ದಿನದಲ್ಲಿ ಸುಮಾರು 11 ಸಾವಿರ ಪ್ರಕರಣಗಳು ದಾಖಲಾಗಿವೆ.



| | ಸೋಂಕಿತರು | ಮೃತರು |
|---|---|---|
| ರಾಜ್ಯ | 1,462 | 41 |
| ದೇಶ | 1,11,671 | 3,439 |
| ವಿಶ್ವ | 50,36,520 | [illegible] |

### ಸಲೂನ್‌ಗಳಿಗೆ ಮಾರ್ಗಸೂಚಿ

ಸಲೂನ್ ಮತ್ತು ಪಾರ್ಲರ್‌ಗಳಲ್ಲಿ ಪ್ರತಿಯೊಬ್ಬ ಗ್ರಾಹಕರಿಗೂ ಪ್ರತ್ಯೇಕವಾಗಿ ಬಳಸಿ ಎಸೆಯಬಹುದಾದ ಟವೆಲ್ ಅಥವಾ ಪೇಪರ್ ಶೀಟ್‌ಗಳನ್ನು ಮಾತ್ರ ಬಳಕೆ ಮಾಡುವಂತೆ ಆರೋಗ್ಯ ಇಲಾಖೆ ಆದೇಶಿಸಿದೆ. ಪ್ರತಿಯೊಬ್ಬ ಗ್ರಾಹಕನಿಗೆ ಬಳಕೆ ಮಾಡಿದ ನಂತರ ಎಲ್ಲಾ ಸಾಧನಗಳನ್ನು 30 ನಿಮಿಷಗಳ ಕಾಲ ಶೇ.7ರಷ್ಟು ಲೈಸೋಲ್ ಬಳಸಿ ಸೋಂಕು ನಿವಾರಣೆ ಮಾಡಬೇಕು. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ಸಾಧನಗಳನ್ನು ಬಳಸಬೇಕು ಎಂದು ಸೂಚಿಸಲಾಗಿದೆ. ವಿವರ»02

### ಆನ್‌ಲೈನ್ ದೇವರ ದರ್ಶನ, ಪೂಜಾ ಸೇವೆ

ದೇವರ ದರ್ಶನ, ಪೂಜಾ ಕೈಂಕರ್ಯಗಳ ನೇರ ವೀಕ್ಷಿಸಲು ಆನ್‌ಲೈನ್ ಮೂಲಕ ವ್ಯವಸ್ಥೆ ಕಲ್ಪಿಸಲು ಮುಜರಾಯಿ ಇಲಾಖೆ ನಿರ್ಧರಿಸಿದೆ. ದೇವರ ದರ್ಶನದ ಆನ್‌ಲೈನ್ ನೇರ ಪ್ರಸಾರಕ್ಕೆ ಸಂಬಂಧಿಸಿದಂತೆ ಇಲಾಖೆಯ ಆಯುಕ್ತರು ಎಲ್ಲಾ ಜಿಲ್ಲಾಧಿಕಾರಿಗಳು ಮತ್ತು ದೇವಸ್ಥಾನಗಳ ಕಾರ್ಯನಿರ್ವಾಹಕರಿಗೆ ಪತ್ರ ಬರೆದಿದ್ದಾರೆ. ವಿವರ»07